ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ಅಕ್ರಮ ಮರಳು ದಂಧೆ ಬಗ್ಗೆ

ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-

314 (409) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಾದ್ಯಂತ ಅಕ್ರಮ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು)

(ಆ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಅತಿ ಹೆಚ್ಚು ಅಕ್ರಮ ಮರಳು ದಂಧೆ ನಡೆಯುತ್ತಿದೆ; (ವಿವರ ಒದಗಿಸುವುದು)

(ಇ) ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಪ್ರತಿ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು ಅಕ್ರಮ ಮರಳು ನಡೆಸುತ್ತಿದ್ದವರನ್ನು ಬಂಧಿಸಿ, ಕಾನೂನು ಕ್ರಮ ಕೈಗೊಳ್ಳುವಂತೆ ಪೊಲೀಸ್ ಅಧಿಕಾರಿಗಳಿಗೆ ಆದೇಶಿಸಿದ್ದು, ಆ ಆದೇಶದ ಅನ್ವಯ ದಾಖಲಾಗಿರುವ ಪ್ರಕರಣಗಳ ವಿವರ ಒದಗಿಸುವುದು;

(ಈ) ಕಳೆದ 5 ವರ್ಷಗಳಿಂದ ಅಕ್ರಮ ಮರಳು ದಂಧೆ ನಡೆಸುತ್ತಿದ್ದವರ ಮೇಲೆ ಕಾನೂನಿನ ಕ್ರಮ ಜರಗಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು? (ಸಂಪೂರ್ಣ ವಿವರ ಒದಗಿಸುವುದು)